114

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್ ರವಿ ರವರ ನಿಯಮ-330 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಹೇಳಿಕೆ:

## ಸೂಚನೆ

ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ 2013 ಮತ್ತು ನಿಯಮಗಳು 2017ರ ಪ್ರಕಾರ ವಿವಿಧ ಇಲಾಖೆಗಳಿಗೆ ಪ್ರತಿ ವರ್ಷ ಹಂಚಿಕೆಯಾಗುವ ಅನುದಾನವನ್ನು ಆಯಾ ವರ್ಷಗಳಲ್ಲೇ ಬಳಕೆ ಮಾಡದೇ ಈ ಅನುದಾನವನ್ನು ಮುಂದಿನ ವರ್ಷಗಳಿಗೆ ಮರುಹಂಚಿಕೆ ಮಾಡಿಕೊಂಡು ಈ ಯೋಜನೆಗಳ ಬಗ್ಗೆ ನಿರ್ಲಕ್ಷ್ಯತನ ತೋರುತ್ತಿರುವುದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಯೋಜನೆಗಳ ಪ್ರಗತಿಯು ಕುಂಠಿತವಾಗಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ:-

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಬಿಡುಗಡೆಯಾದ ಅನುದಾನದಡಿ ಆಯಾ ವರ್ಷ 97% ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ. ಆದರೆ, ಕೆಲವು ಸಂದರ್ಭಗಳಲ್ಲಿ ಆರ್ಥಿಕ ವರ್ಷದ ಅಂತ್ಯದಲ್ಲಿ ಬಿಡುಗಡೆಯಾಗುವ ಅನುದಾನವು ಉಳಿಕೆಯಾಗುತ್ತದೆ. ಕೆಲವು ಇಲಾಖೆಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಆರ್ಥಿಕ ವರ್ಷದ ಅಂತ್ಯಕ್ಕೆ ಬಿಡುಗಡೆಯಾಗುವ ಅನುದಾನವನ್ನು ಪುನರ್ ಮೌಲ್ಯೀಕರಿಸಿ ಪರಿಶಿಷ್ಟ ಜಾತಿ/ಪ.ಪಂಗಡದವರ ಅಭಿವೃದ್ಧಿಗೆ ಮುಂದಿನ ವರ್ಷ ವಿನಿಯೋಗಿಸಲು ಕ್ರಮವಹಿಸಲಾಗುತ್ತಿದೆ.

ಆಯಾ ಆರ್ಥಿಕ ವರ್ಷದಲ್ಲಿ ಉಳಿಕೆಯಾದ ಮೊತ್ತವನ್ನು ಲೆಕ್ಕಪರಿಶೋಧನೆ ಆದ ನಂತರ ಮುಂದಿನ ಆರ್ಥಿಕ ವರ್ಷದ ನಂತರದ ಆರ್ಥಿಕ ವರ್ಷದಲ್ಲಿ ಮರುಹಂಚಿಕೆ ಮಾಡಿ, ಸದರಿ ಅನುದಾನವನ್ನು ಪರಿಶಿಷ್ಟ ಜಾತಿ/ಪ.ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸಲು ಕ್ರಮವಹಿಸಲಾಗಿದೆ. ನೋಡಲ್ ಏಜೆನ್ಸಿ ಅಧ್ಯಕ್ಷರಾದ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ನಿಯಮಿತವಾಗಿ ಸಭೆಗಳನ್ನು ನಡೆಸಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿರುವ ಅನುದಾನವನ್ನು ಆಯಾ ವರ್ಷವೇ ವಿನಿಯೋಗಿಸುವಂತೆ ಕ್ರಮಕೈಗೊಳ್ಳಲು ಎಲ್ಲಾ ಇಲಾಖೆಗಳ ಅನುಷ್ಠಾನಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಸಕಇ 260 ಎಸ್‌ಎಲ್‌ಪಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು